ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವ ಸಮಿತಿಗೆ ಲೋಕಸಭೆ ಮತ್ತು ರಾಜ್ಯಸಭೆಯ ಸದಸ್ಯರುಗಳನ್ನು ನೇಮಕ ಮಾಡುವ ಬಗ್ಗೆ.

ಓದಲಾಗಿದೆ:- ಸರ್ಕಾರದ ಆದೇಶ ಸಂಖ್ಯೆ: ಸಕಇ 221 ಬಿಸಿಎ 2008, ದಿ: 02-01-2009.

***

ಪ್ರಸ್ತಾವನೆ:-

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ: 02-01-2009 ರ ಸರ್ಕಾರದ ಆದೇಶದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳಿಂದ ಅನುಷ್ಠಾನಗೊಳಿಸುವ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರನ್ನೊಳಗೊಂಡ ಆಯ್ಕೆ ಸಮಿತಿಯನ್ನು ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 1 | ವಿಧಾನಸಭಾ ಕ್ಷೇತ್ರದ ಶಾಸಕರು | ಅಧ್ಯಕ್ಷರು |
| 2 | ಆಯಾ ಲೋಕಸಭಾ ಕ್ಷೇತ್ರದ ಸದಸ್ಯರು | ಸದಸ್ಯರು |
| 3 | ಆಯಾ ರಾಜ್ಯ ಸಭಾ ಕ್ಷೇತ್ರದಲ್ಲಿ ಖಾಯಂ ಆಗಿ ವಾಸಿಸುವಂತಹ ರಾಜ್ಯ ಸಭಾ ಸದಸ್ಯರು | ಸದಸ್ಯರು |
| 4 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಸದಸ್ಯರು |
| 5 | ತಾಲ್ಲೂಕು ಕಾರ್ಯ ನಿರ್ವಹಣಾಧಿಕಾರಿ | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಪಂಚಾಯತ್ | ಸದಸ್ಯರು |
| 7 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ. | ಸದಸ್ಯರು |
| 8 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುತ್ಶಕ್ತಿ ಮಂಡಳಿ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 9 | ತಾಲ್ಲೂಕು ಸಹಾಯಕ ನಿರ್ದೇಶಕರು, ಕೈಗಾರಿಕಾ ಇಲಾಖೆ | ಸದಸ್ಯರು |
| 10 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 11 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 12 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ತೋಟಗಾರಿಕೆ ಇಲಾಖೆ | ಸದಸ್ಯರು |
| 13 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 14 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು | ಸದಸ್ಯರು |
| 15 | ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ, ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಭಿವೃದ್ಧಿ ಅಧಿಕಾರಿ/ಅಭಿವೃದ್ಧಿ ಸಹಾಯಕರು (ಆಯಾ ನಿಗಮಕ್ಕೆ ಸಂಬಂಧಿಸಿದಂತೆ). | ಸದಸ್ಯ ಕಾರ್ಯದರ್ಶಿ |

ಮೇಲೆ ವಿವರಿಸಿರುವಂತೆ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಿಗಮಗಳಿಂದ ಅನುಷ್ಠಾನಗೊಳಿಸುವ ಯೋಜನೆಗಳ ಫಲಾನುಭವಿಗಳ ಆಯ್ಕೆಯ ಕುರಿತಂತೆ ರಚಿಸಲಾದ ಸಮಿತಿಯ ಬಗ್ಗೆ ಪುನಃ ಪರಿಶೀಲಿಸಲಾಗಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಮಾಡುವುದು ಆದೇಶ.

ಸರ್ಕಾರಿ ಆದೇಶ ಸಂಖ್ಯೆ:ಸಕಇ 162 ಎಸ್‌ಡಿಸಿ 2015 (ಭಾ),
ಬೆಂಗಳೂರು, ದಿನಾಂಕ:04/07/2016.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಬರುವ ಡಾ|| ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಹಾಗೂ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ [illegible]

ಫಲಾನುಭವಿಗಳನ್ನು ಆಯ್ಕೆ ಮಾಡಲು ಈ ಕೆಳಕಂಡಂತೆ ಅಧ್ಯಕ್ಷರು/ಸದಸ್ಯರುಗಳನ್ನೊಳಗೊಂಡ ಆಯ್ಕೆ ಸಮಿತಿಯನ್ನು [illegible] ರಚಿಸಿ ಆದೇಶಿಸಲಾಗಿದೆ.

| | | |
|---|---|---|
| 1 | ವಿಧಾನಸಭಾ ಕ್ಷೇತ್ರದ ಶಾಸಕರು | ಅಧ್ಯಕ್ಷರು |
| 2 | ತಾಲ್ಲೂಕಿನಲ್ಲಿ ಖಾಯಂ ಆಗಿ ವಾಸಿಸುತ್ತಿರುವ ವಿಧಾನ ಪರಿಷತ್ತಿನ ಸದಸ್ಯರು | ಉಪಾಧ್ಯಕ್ಷರು |
| 3 | ಆಯಾ ಲೋಕಸಭಾ ಕ್ಷೇತ್ರದ ಸದಸ್ಯರು | ಸದಸ್ಯರು |
| 4 | ಆಯಾ ರಾಜ್ಯ ಸಭಾ ಕ್ಷೇತ್ರದಲ್ಲಿ ಖಾಯಂ ಆಗಿ ವಾಸಿಸುವಂತಹ ರಾಜ್ಯ ಸಭಾ ಸದಸ್ಯರು | ಸದಸ್ಯರು |
| 5 | ತಾಲ್ಲೂಕು ಕಾರ್ಯ ನಿರ್ವಹಣಾಧಿಕಾರಿ | ಸದಸ್ಯರು |
| 6 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಜಿಲ್ಲಾ ಪಂಚಾಯತ್ | ಸದಸ್ಯರು |
| 7 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆ | ಸದಸ್ಯರು |
| 8 | ಸಹಾಯಕ ಕಾರ್ಯಪಾಲಕ ಅಭಿಯಂತರರು, ಕರ್ನಾಟಕ ವಿದ್ಯುತ್‌ಶಕ್ತಿ ಮಂಡಳ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ) | ಸದಸ್ಯರು |
| 9 | ತಾಲ್ಲೂಕು ಸಹಾಯಕ ನಿರ್ದೇಶಕರು, ಕೈಗಾರಿಕಾ ಇಲಾಖೆ | ಸದಸ್ಯರು |
| 10 | ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರು | ಸದಸ್ಯರು |
| 11 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ಕೃಷಿ ಇಲಾಖೆ | ಸದಸ್ಯರು |
| 12 | ತಾಲ್ಲೂಕಿನ ಸಹಾಯಕ ನಿರ್ದೇಶಕರು, ತೋಟಗಾರಿಕೆ ಇಲಾಖೆ. | ಸದಸ್ಯರು |
| 13 | ಸಂಬಂಧಿಸಿದ ಜಿಲ್ಲೆಯ ಅರಣ್ಯಾಧಿಕಾರಿ | ಸದಸ್ಯರು |
| 14 | ಹಿಂದುಳಿದ ವರ್ಗಗಳ ಇಲಾಖೆಯ ನಿರೀಕ್ಷಕರು | ಸದಸ್ಯರು |
| 15 | ಕರ್ನಾಟಕ ಪರಿಶಿಷ್ಟ ಜಾತಿ/ವರ್ಗಗಳ ಅಭಿವೃದ್ಧಿ ನಿಗಮದ ತಾಲ್ಲೂಕು ಅಭಿವೃದ್ಧಿ ಅಧಿಕಾರಿ, ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಭಿವೃದ್ಧಿ ಅಧಿಕಾರಿ/ಅಭಿವೃದ್ಧಿ ಸಹಾಯಕರು (ಆಯಾ ನಿಗಮಕ್ಕೆ ಸಂಬಂಧಿಸಿದವರು). | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಬಿ.ಎಸ್.ಸುಮತಿ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:-

ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕೋರಿದೆ.

ಪ್ರತಿಗಳು:-

1. ಮಹಾಲೇಖಪಾಲರು (ಎ & ಇ ಲೆಕ್ಕ ಪರಿಶೋಧನೆ-1, 2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3. ಎಲ್ಲಾ ಸದಸ್ಯರುಗಳಿಗೆ.
4. ಅಧ್ಯಕ್ಷರು, ವಿದ್ಯುಚ್ಛಕ್ತಿ ಮಂಡಳ (ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ), ಬೆಂಗಳೂರು.
5. ಎಲ್ಲಾ ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು.
6. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
7. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
8. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು
9. ವ್ಯವಸ್ಥಾಪಕ ನಿರ್ದೇಶಕರು, ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಬೆಂಗಳೂರು.
11. ವ್ಯವಸ್ಥಾಪಕರ ನಿರ್ದೇಶಕರು, ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಮಾಹಿತಿಗಾಗಿ :-

1. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಅಲ್ಪಸಂಖ್ಯಾತ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು